**All India Radio: Bangalore**
**Regional Bulletin In Kannada**
**24.05.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

- **ಮೈಸೂರಿನಲ್ಲಿ ೬ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಸಿಇಟಿ ಪರೀಕ್ಷಾ ಫಲಿತಾಂಶ ಪ್ರಕಟ : ಇಂಜಿನಿಯರಿಂಗ್ ವಿಭಾಗದಲ್ಲಿ ಭವೇಶ್ ಜಯಂತಿಗೆ ಮೊದಲ ರ್‍ಯಾಂಕ್**
- **ಬೆಂಗಳೂರಿನಲ್ಲಿ ಸುರಂಗ ರಸ್ತೆ ನಿರ್ಮಾಣ : ಅಧಿಕಾರಿಗಳೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚರ್ಚೆ**
- **ಕೇರಳ ಪ್ರವೇಶಿಸಿದ ಮುಂಗಾರು : ರಾಜ್ಯದಲ್ಲಿ ಮುಂದಿನ ೪ ದಿನಗಳ ಕಾಲ ಧಾರಾಕಾರ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ**

<><><><>

ಇಂದಿರಾ ಕ್ಯಾಂಟೀನ್‌ಗಳನ್ನು ಮೊದಲ ಬಾರಿ ಮುಖ್ಯಮಂತ್ರಿಯಾಗಿ ಬಡವರು, ಕೂಲಿ ಕಾರ್ಮಿಕರು, ಆಸ್ಪತ್ರೆಗಳಿಗೆ ಬರುವ ಜನರ ಹಸಿವು ನೀಗಿಸುವ ಉದ್ದೇಶದಿಂದ ಆರಂಭಿಸಲಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ಹಿನಕಲ್‌ನಲ್ಲಿ ೬ ಇಂದಿರಾ ಕ್ಯಾಂಟೀನ್‌ಗಳನ್ನು ಜನಾರ್ಪಣೆಗೊಳಿಸಿ ಮಾತನಾಡಿದ ಅವರು, ಹಿನಕಲ್ ಗ್ರಾಮದ ಸಂಪೂರ್ಣ ಅಭಿವೃದ್ಧಿಗೆ ಬದ್ಧ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಹೊಸದಾಗಿ ೧೮೮ ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸುವುದಾಗಿ ಸ್ಪಷ್ಟಪಡಿಸಿದ್ದಾರೆ.

<><><><>

ಇಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಶಿಕ್ಷಣ ಕೋರ್ಸ್‌ಗಳಿಗೆ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕಳೆದ ತಿಂಗಳಲ್ಲಿ ನಡೆಸಿದ ಸಿಇಟಿ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದೆ. ಸುದ್ದಿಗೋಷ್ಠಿಯಲ್ಲಿ ಫಲಿತಾಂಶ ಪ್ರಕಟಿಸಿದ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್ ಈ ಬಾರಿ ಮೂರು ಲಕ್ಷದ ೩೦ ಸಾವಿರ ವಿದ್ಯಾರ್ಥಿಗಳು ಅರ್ಜಿ ಸಲ್ಲಿಕೆ ಮಾಡಿದ್ದು, ೩ ಲಕ್ಷದ ೧೧ ಸಾವಿರ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆ ಹಾಜರಾಗಿದ್ದರು ಎಂದು ತಿಳಿಸಿದ್ದಾರೆ. ಭೌತಶಾಸ್ತ್ರದಲ್ಲಿ ೧ ಗ್ರೇಸ್ ಅಂಕ ಹಾಗೂ ರಸಾಯನ ಶಾಸ್ತ್ರ ೨ ಪ್ರಶ್ನೆಗೆ ಎರಡು ಸರಿ ಉತ್ತರ, ಜೀವಶಾಸ್ತ್ರ ೧ ಪ್ರಶ್ನೆಗೆ ೨ ಸರಿ ಉತ್ತರ ಎಂದು ಪರಿಗಣನೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಸಿಇಟಿ ಇಂಜಿನಿಯರಿಂಗ್ ವಿಭಾಗದಲ್ಲಿ ಭವೇಶ್ ಜಯಂತಿ ಮೊದಲ ರ್‍ಯಾಂಕ್ ಗಳಿಸಿದ್ದಾರೆ. ಸಾತ್ವಿಕ್ ಬಿರಾದರ್ ೨ನೇ ರ್‍ಯಾಂಕ್ ಗಳಿಸಿದ್ದು, ದಿನೇಶ್ ಗೋಮತಿ ೩ನೇ ಸ್ಥಾನ ಪಡೆದಿದ್ದಾರೆ. ಕೃಷಿ ವಿಭಾಗದಲ್ಲಿ ಅಕ್ಷಯ್ ಎಂ. ಮೊದಲ ಸ್ಥಾನ ಗಳಿಸಿದರೆ, ಪಶು ವೈದ್ಯಕೀಯದಲ್ಲಿ ಹರೀಶ್ ರಾಜ್ ಅಗ್ರ ಸ್ಥಾನ ಪಡೆದಿದ್ದಾರೆ.

<><><><>

ಬೆಂಗಳೂರಲ್ಲಿ ಸುರಂಗ ರಸ್ತೆ ನಿರ್ಮಾಣ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸೌಧದಲ್ಲಿ ಇಂದು ರಾಜ್ಯ ಸರಕಾರದ ಉನ್ನತ ಅಧಿಕಾರಿಗಳ ಜತೆ ಸಭೆ ನಡೆಸಿದರು. ಸಭೆಯಲ್ಲಿ ಸುರಂಗ್ ರಸ್ತೆ ನಿರ್ಮಾಣ ಕುರಿತಂತೆ ಸಾಧಕ-ಬಾಧಕಗಳ ಬಗ್ಗೆ ಚರ್ಚೆ ನಡೆಸಿದರು. ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್, ಮುಖ್ಯ ಆಯುಕ್ತ ಮಹೇಶ್ವರ ರಾವ್, ಪೊಲೀಸ್ ಮಹಾ ನಿರ್ದೇಶಕ ಎಂ.ಎ.ಸಲೀಂ, ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಯರಾಮ್, ಬಿಎಂಆರ್‌ಡಿಎ ಆಯುಕ್ತ ರಾಜೇಂದ್ರ ಚೋಳನ್ ಮತ್ತಿತರರು ಉಪಸ್ಥಿತರಿದ್ದರು.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೨ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ನೀವು ಈ ಕಾರ್ಯಕ್ರಮವನ್ನು ಕೇಳಬಹುದು.

<><><><>

ನೈಋತ್ಯ ಮುಂಗಾರು ಇಂದು ಕೇರಳ ಪ್ರವೇಶಿಸಿದೆ. ಈ ಬಾರಿ ೮ ದಿನ ಮುಂಚಿತವಾಗಿ ಕೇರಳ ಪ್ರವೇಶಿಸಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ೨೦೦೯ರಲ್ಲಿ ಮೇ ೨೩ಕ್ಕೆ ಮುಂಗಾರು ಭಾರತದ ಕರಾವಳಿ ಪ್ರವೇಶಿಸಿತ್ತು. ಇಂದಿನಿಂದ ಮುಂದಿನ ೪ ದಿನಗಳವರೆಗೆ ರಾಜ್ಯದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಮುನ್ನೆಚ್ಚರಿಕೆ ನೀಡಿದ್ದಾರೆ. ಕೊಡಗು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಲಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲೂ ಇಂದಿನಿಂದ ಮುಂದಿನ ೪ ದಿನಗಳ ಕಾಲ ಮಳೆಯಾಗಲಿದೆ. ಉತ್ತರಕನ್ನಡ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದ್ದಾರೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ನಿರ್ದೇಶನ ನೀಡಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆ ಮುಂದುವರೆದಿದ್ದು ಜನ ಜೀವನ ಅಸ್ತ ವ್ಯಸ್ತಗೊಂಡಿದೆ. ಚಿಕ್ಕಮಗಳೂರು, ಮೂಡಿಗೆರೆ, ತರೀಕೆರೆ, ಕಳಸ ಭಾಗಗಳಲ್ಲಿ ರಾತ್ರಿ ಮಳೆಯಾಗಿದ್ದು, ವಿದ್ಯುತ್ ಸಂಪರ್ಕ ಕಡಿತಗೊಂಡಿದೆ.

<><><><>

ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟಮಾಡುವವರು ಮತ್ತು ಕೃತಕ ಅಭಾವ ಸೃಷ್ಟಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಾದ್ಯಂತ ಮುಂಗಾರು ಪೂರ್ವ ಮಳೆ ಉತ್ತಮ ಆರಂಭವಾಗಿದ್ದು, ರೈತರಿಗೆ ಬೇಕಾದ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಾಕಷ್ಟು ದಾಸ್ತಾನಿದೆ. ಆದರೂ ಕೃತಕ ಅಭಾವ ಸೃಷ್ಟಿಸಿ, ಕಾಳ ಸಂತೆಯಲ್ಲಿ ಮಾರಾಟ ಮಾಡುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ನಿರ್ಧಾಕ್ಷಿಣ್ಯವಾಗಿ ಕಠಿಣ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><><><>

ವಿಶ್ವ ಬ್ಯಾಂಕ್ ನೆರವಿನೊಂದಿಗೆ ಜಲ್ ಜೀವನ್ ಮಿಷನ್ ಯೋಜನೆಯಡಿ ದಾವಣಗೆರೆ ಜಿಲ್ಲೆಯ ೧೦೦ ಗ್ರಾಮಗಳಲ್ಲಿ ವಾರದ ಏಳು ದಿನವೂ ದಿನದ ೨೪ ಗಂಟೆಗಳ ಕಾಲ ನೀರು ಪೂರೈಕೆಗೆ ಸಿದ್ಧತೆ ನಡೆದಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಸುರೇಶ್ ಇಟ್ನಾಳ್ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮತ್ತು ತಾವು ಸೇರಿದಂತೆ ಎಲ್ಲ ಅಧಿಕಾರಿಗಳು ತಲಾ ಎರಡು ಗ್ರಾಮಗಳನ್ನು ದತ್ತು ಪಡೆದುಕೊಂಡಿದ್ದು, ಈ ಮೂಲಕ ಯೋಜನೆಯ ಯಶಸ್ಸಿಗೆ ಕಾರ್ಯ ಪ್ರವೃತ್ತರಾಗುವುದಾಗಿ ಹೇಳಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ವಿವಿಧ ಭಾಗಗಳಲ್ಲಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರಿಗೆ ಮನವಿ ಮಾಡಿದ್ದಾರೆ. ಹೊಸಕೋಟೆ ನಗರದಲ್ಲಿ ೪೦೦/೨೦೦ ಕೆ.ವಿ ಸಾಮರ್ಥ್ಯದ

ವಿದ್ಯುತ್ ಉಪಕೇಂದ್ರ, ದೇವನಗುಂದಿ ಕೈಗಾರಿಕಾ ಪ್ರದೇಶದಲ್ಲಿ ೨೨೦ ಕೆ.ವಿ ಸಾಮರ್ಥ್ಯದ ವಿದ್ಯುತ್ ಉಪಕೇಂದ್ರ, ತಾತನೂರು, ಬಾನಹಳ್ಳಿ, ತಮ್ಮರಸನಹಳ್ಳಿ, ಎಂ ಸತ್ಯವಾರ, ಅಟ್ಟೂರಿನಲ್ಲಿ ೬೬ ಕೆ.ವಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಬೆಸ್ಕಾಂ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ಕಳೆದ ೨೦ ದಿನಗಳಲ್ಲಿ ರಾಜ್ಯದಲ್ಲಿ ಕೋವಿಡ್ ಸಕ್ರಿಯ ಪ್ರಕರಣಗಳ ಸಂಖ್ಯೆ ಹೆಚ್ಚಳವಾಗಿದ್ದು, ಒಟ್ಟು ೩೫ ಪ್ರಕರಣಗಳು ದಾಖಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಗರ್ಭಿಣಿಯರು, ಮಕ್ಕಳು ಹಾಗೂ ಇತರ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವವರು ಮುಂಜಾಗ್ರತಾ ಕ್ರಮವಾಗಿ ಮಾಸ್ಕ್ ಧರಿಸುವುದು ಸೂಕ್ತ ಎಂದು ಹೇಳಿದ್ದಾರೆ. ಬೆಳಗಾವಿ ಜಿಲ್ಲೆಯ ಯಳ್ಳೂರ ಗ್ರಾಮದ ೨೫ ವರ್ಷದ ಗರ್ಭಿಣಿಯೊಬ್ಬರಲ್ಲಿ ಕಾಣಿಸಿಕೊಂಡಿದೆ ಎಂದು ಜಿಲ್ಲಾ ಅರೋಗ್ಯಾಧಿಕಾರಿ ಡಾ. ಈಶ್ವರ ಗಡಾದ ತಿಳಿಸಿದ್ದಾರೆ. ರೋಗದ ಲಕ್ಷಣ ಕಂಡು ಬಂದಾಗ ಸಮೀಪದ ಸರ್ಕಾರಿ ಇತರೆ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

<><><><>

ಕನ್ನಡದ ಸಣ್ಣ ಕಥೆಗಳ ಜನಕರೆಂದೇ ಖ್ಯಾತಿ ಹೊಂದಿದ್ದ ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ನೂರಕ್ಕೂ ಹೆಚ್ಚು ಕೃತಿಗಳನ್ನು ರಚಿಸಿ ಕನ್ನಡವನ್ನು ಹೃದಯ ಭಾಗವಾಗಿ ಜೀವಂತವಿರಿಸಿಕೊಂಡವರು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ.ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ೧೩೪ನೇ ಜಯಂತಿ ಕಾರ್ಯಕ್ರಮ ಜೂನ್ ೬ರಂದು ಮಾಲೂರು ತಾಲ್ಲೂಕಿನ ಮಾಸ್ತಿ ಗ್ರಾಮದಲ್ಲಿ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>